RNU AIR DHARWAD

NOVEMBER 19, 2026

AKASHAVANI - DHARWAD

PRADESH SAMACHARA (KANNADA) 07.05 A.M.

<><><>

ಮುಖ್ಯಾಂಶಗಳು;

- **ಪುರ 'ರ ್ಟೀ ಸಮ ಪ್ರಮಾಣದಲ್ಲಿ ಮಹಿಳೆಯರು ಶಾಸಕಾಂಗದಲ್ಲಿ ಪಾಲ್ಗೊಂಡಾಗ ಪ್ರಜಾಪ್ರಭುತ್ವ ವ್ಯವಸ್ಥೆ ಪೂರ್ಣಗೊಳ್ಳಲು ಸಾಧ್ಯ– ರಾಜ್ಯಪಾಲರು.**

- **ಇದೇ 30ರಂದು ಮಂಗಳೂರಿನಲ್ಲಿ ಕರಾವಳಿ ವಿಭಾಗ ಮಟ್ಟದ ಬೃಹತ್ ಉದ್ಯೋಗ ಮೇಳ –ಸಚಿವ ಯು.ಟಿ. ಖಾದರ್.**

- **ಜಾನುವಾರುಗಳಿಗೆ ರೋಗ ತಡೆ ಲಸಿಕೆ ಸಮರ್ಪಕವಾಗಿ ತಲುಪಿಸಲು ಕ್ರಮ– ಸಚಿವ ಸಿ. ಪುಟ್ಟರಂಗಶೆಟ್ಟಿ**

- **ಕೇಂದ್ರ ಸರ್ಕಾರದೊಂದಿಗೆ ಸಮನ್ವಯ ಸಾಧಿಸುವ ಬದಲು ರಾಜ್ಯ ಸರ್ಕಾರ ಪದೇ ಪದೇ ಸಂಘ 'ರ್ಷಕ್ಕೆ ಇಳಿಯುತ್ತಿದೆ – ವಿಪಕ್ಷ ನಾಯಕ ಆರ್. ಅಶೋಕ್ ಆರೋಪ.**

ವಾರ್ತೆಗಳ ವಿವರ...

<><><>

ಪುರ 'ರ ್ಟೀ ಸಮ ಪ್ರಮಾಣದಲ್ಲಿ ಮಹಿಳೆಯರು ಶಾಸಕಾಂಗದಲ್ಲಿ ಪಾಲ್ಗೊಂಡಾಗ ಮಾತ್ರವೇ ಪ್ರಜಾಪ್ರಭುತ್ವ ವ್ಯವಸ್ಥೆಯು ಪೂರ್ಣಗೊಳ್ಳಲು ಸಾಧ್ಯವೆಂದು ರಾಜ್ಯಪಾಲರಾದ ಸುಧಾ ಯಾದವ್ ಹೇಳಿದ್ದಾರೆ. ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಕರ್ನಾಟಕ ವಿಧಾನಮಂಡಲ ವತಿಯಿಂದ ಏರ್ಪಡಿಸಲಾಗಿದ್ದ ಮೊಟ್ಟ ಮೊದಲ ಕಾಮನ್ ವೆಲ್ತ್ ಮಹಿಳಾ ಸಂಸದೀಯರ ಪ್ರಾದೇಶಿಕ ಸಮ್ಮೇಳನದ ಸಮಾರೋಪ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು; ದೇಶದ ಅರ್ಧದಷ್ಟಿರುವ ಮಹಿಳೆಯರು ನಿರ್ಧಾರ ತೆಗೆದುಕೊಳ್ಳುವ ಶಾಸಕಾಂಗ ಪ್ರಕ್ರಿಯೆಯಲ್ಲಿ ಸಮಾನವಾಗಿ ಭಾಗಿಯಾಗದ ಹೊರತು ಯಾವುದೇ ಪ್ರಜಾಪ್ರಭುತ್ವವು ಪೂರ್ಣಗೊಳ್ಳಲು ಸಾಧ್ಯವಿಲ್ಲ ಎಂದರು. ಸಮಾಜದ ಪ್ರಗತಿಗೆ ಮಹಿಳೆ ಮತ್ತು ಪುರು 'ರ ಸಮಾನ ಶಕ್ತಿ ಅಗತ್ಯವಾಗಿರುತ್ತದೆ. ಮಹಿಳೆ ಮತ್ತು ಪುರು 'ರಿಬ್ಬರ ಸಮಾನ ಶಕ್ತಿಯಿಲ್ಲದೆ ಸಮಾಜದ ಪ್ರಗತಿ ಸಾಧ್ಯವಿಲ್ಲ. ಈ ಎರಡು ದಿನಗಳ ಸಮ್ಮೇಳನದಲ್ಲಿ ನಡೆದ ವಿಚಾರ ಮಂಥನವು ಮುಂಬರುವ ವ 'ರ್ಗಳಲ್ಲಿ 'ವಿಕಸಿತ ಭಾರತ 2047' ಮತ್ತು ನ್ಯಾಯಸಮ್ಮತ ವಿಶ್ವದ ನಿರ್ಮಾಣಕ್ಕೆ ಮೈಲಿಗಲ್ಲಾಗಲಿದೆ ಎಂದರು.

<><><>

ರಾಜ್ಯ ಸರ್ಕಾರದ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಹಾಗೂ ಕರ್ನಾಟಕ ಕೌಶಲ್ಯಾಭಿವೃದ್ಧಿ ನಿಗಮದ ವತಿಯಿಂದ ಇದೇ 30ರಂದು ಮಂಗಳೂರಿನ ಸಂತ ಅಲೋಶಿಯಸ್ ಪರಿಗಣಿತ ವಿಶ್ವವಿದ್ಯಾಲಯದ ಆವರಣದಲ್ಲಿ ಕರಾವಳಿ ವಿಭಾಗ ಮಟ್ಟದ ಬೃಹತ್ ಉದ್ಯೋಗ ಮೇಳ ಆಯೋಜಿಸಲಾಗಿದೆ ಎಂದು ದಕ್ಷಿಣ ಕನ್ನಡ ಜಿಲ್ಲಾ ಉಸ್ತುವಾರಿ ಸಚಿವ

ಯು.ಟಿ. ಖಾದರ್ ತಿಳಿಸಿದ್ದಾರೆ. ಮಂಗಳೂರಿನಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಉದ್ಯೋಗ ಮೇಳದಲ್ಲಿ 200ಕ್ಕೂ ಅಧಿಕ ಉದ್ಯೋಗದಾತರು ಹಾಗೂ 10 ಸಾವಿರಕ್ಕೂ ಹೆಚ್ಚು ಉದ್ಯೋಗಾಕಾಂಕ್ಷಿಗಳು ಭಾಗವಹಿಸುವ ನಿರೀಕ್ಷೆಯಿದೆ ಎಂದರು. ಅಂದು ಬೆಳಗ್ಗೆ 9ಗಂಟೆಗೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಉದ್ಯೋಗದ ಮೇಳಕ್ಕೆ ಚಾಲನೆ ನೀಡುವರು. ವೈದ್ಯಕೀಯ ಶಿಕ್ಷಣ ಡಾ.ಶರಣಪ್ರಕಾಶ್ ಆರ್. ಪಾಟೀಲ್, ಉಡುಪಿ ಜಿಲ್ಲಾ ಉಸ್ತುವಾರಿ ಸಚಿವ ರಿಜ್ವಾನ್ ಅ ್ದ್ ಮತ್ತಿತರರು ಅತಿಥಿಗಳಾಗಿ ಪಾಲ್ಗೊಳ್ಳುವರು. ದಕ್ಷಿಣ ಕನ್ನಡ ಜಿಲ್ಲೆಯೊಂದಿಗೆ ಉಡುಪಿ, ಉತ್ತರ ಕನ್ನಡ, ಚಿಕ್ಕಮಗಳೂರು, ಕೊಡಗು ಹಾಗೂ ಹಾಸನ ಜಿಲ್ಲೆಗಳ ಉದ್ಯೋಗಾಕಾಂಕ್ಷಿಗಳೂ ಮೇಳದಲ್ಲಿ ಭಾಗವಹಿಸಲಿದ್ದಾರೆ ಎಂದು ಅವರು ಮಾಹಿತಿ ನೀಡಿದರು.

<><><>

ಆರೋಗ್ಯವೆಂಬುದು ಕೇವಲ ಆಸ್ಪತ್ರೆಗಳಲ್ಲಿ ಸಿಗುವ ವಸ್ತುವಲ್ಲ. ಅದು ನಮ್ಮ ದಿನಚರಿಯಲ್ಲಿ ಅಡಗಿದೆ. ಹೀಗಾಗಿ ಆರೋಗ್ಯ ಕಾಪಾಡಿಕೊಳ್ಳುವುದಲ್ಲ, ಅದನ್ನು ಉಳಿಸಿಕೊಳ್ಳಬೇಕು ಎಂದು ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವರೂ ಆದ ಜಲಸಂಪನ್ಮೂಲ ಖಾತೆ ಸಚಿವ ಎನ್.ಚಲುವರಾಯಸ್ವಾಮಿ ಸಲಹೆ ನೀಡಿದ್ದಾರೆ. ಮಂಡ್ಯ ಜಿಲ್ಲೆಯ ನಾಗಮಂಗಲದಲ್ಲಿರುವ ರಾಷ್ಟ್ರೀಯ ಪ್ರಕೃತಿ ಚಿಕಿತ್ಸಾ ಸಂಸ್ಥೆಯ (ಆಯು ್) ಕೇಂದ್ರೀಯ ಯೋಗ ಮತ್ತು ಪ್ರಕೃತಿ ಚಿಕಿತ್ಸಾ ಅನುಸಂಧಾನ ಸಂಸ್ಥೆಯ ಆವರಣದಲ್ಲಿ ಇಂದು ನಡೆದ 9ನೇ ರಾಷ್ಟ್ರೀಯ ಪ್ರಕೃತಿ ಚಿಕಿತ್ಸಾ ದಿನಾಚರಣೆ ಉದ್ಘಾಟಿಸಿ ಸಚಿವರು ಮಾತನಾಡಿದರು. ರಾ ್ಟ್ರಪಿತ ಮಹಾತ್ಮ ಗಾಂಧೀಜಿಯವರು 1945ರ ನವೆಂಬರ್ 18ರಂದು 'ಆಲ್ ಇಂಡಿಯಾ ನೇಚರ್ ಕ್ಯೂರ್ ಫೌಂಡೇಶನ್ ಟ್ರಸ್ಟ್'ನ ಅಧ್ಯಕ್ಷರಾಗಿ ಜೀವಮಾನದ ಸದಸ್ಯತ್ವವನ್ನು ಸ್ವೀಕರಿಸಿದ ಐತಿಹಾಸಿಕ ದಿನವಿದು. ಗಾಂಧೀಜಿಯವರು ಪ್ರಕೃತಿ ಚಿಕಿತ್ಸೆಯನ್ನು ಕೇವಲ ಒಂದು ವೈದ್ಯಕೀಯ ಪದ್ಧತಿಯಾಗಿ ನೋಡದೆ, ಅದನ್ನು ಸರಳ, ಸ್ವಾವಲಂಬಿ ಮತ್ತು ನೈತಿಕ ಜೀವನಶೈಲಿಯ ಭಾಗವಾಗಿ ಪ್ರತಿಪಾದಿಸಿದ್ದರು ಎಂದರು.

<><><>

ಪದವೀಧರ ಯುವಜನರಿಗೆ 6 ತಿಂಗಳ ವಿಶೇ ್ ತರಬೇತಿ ನೀಡಿ, ಪ್ರಮಾಣಪತ್ರ ಹಾಗೂ ಪರವಾನಿಗೆ ಒದಗಿಸುವ ಮೂಲಕ ಅವರಿಂದ ಸಹಕಾರಿ ಸಂಘಗಳ ಲೆಕ್ಕ ಪರಿಶೋಧನೆ ನಡೆಸುವ ಯೋಜನೆಯನ್ನು ರೂಪಿಸಲಾಗಿದೆ ಎಂದು ಸಹಕಾರ ಸಚಿವ ಲಕ್ಷ್ಮಣ ಸವದಿ ಹೇಳಿದ್ದಾರೆ. ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರಿನಲ್ಲಿ ನಡೆದ ಜಿಲ್ಲಾ ಮಟ್ಟದ ಅಖಿಲ ಭಾರತ ಸಹಕಾರ ಸಪ್ತಾಹ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಈ ಯೋಜನೆಯಿಂದ ಸಹಕಾರಿ ಕ್ಷೇತ್ರದಲ್ಲಿ ಗುಣಮಟ್ಟದ ಲೆಕ್ಕ ಪರಿಶೋಧನೆಗೆ ಉತ್ತೇಜನ ದೊರೆಯುವುದರ ಜತೆಗೆ ಪದವೀಧರ ಯುವಜನರಿಗೆ ಉದ್ಯೋಗ ಸೃಷ್ಟಿಯಾಗಿ ಸ್ವಂತ ಆದಾಯ ಗಳಿಸಲು ಉತ್ತಮ ಅವಕಾಶ ಲಭಿಸಲಿದೆ ಎಂದರು.

<><><>

ಈಗ ಪ್ರಕಟಣೆ ಬಳಿಕ ಪ್ರದೇಶ ಸಮಾಚಾರ ಮುಂದುವರಿಯುವುದು

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ

<><><>

ಪಶು ಆರೋಗ್ಯ ಮತ್ತು ಜೈವಿಕ ಸಂಸ್ಥೆಯು ರಾಜ್ಯದಲ್ಲಿ ಸ್ಥಾಪನೆಯಾದ ಮೊದಲ ಪ್ರಾಣಿ ಲಸಿಕಾ ಸಂಸ್ಥೆಯಾಗಿದ್ದು, ರಾಜ್ಯದಾದ್ಯಂತ ಇರುವ ಜಾನುವಾರುಗಳಿಗೆ ವಿವಿಧ ಸಾಂಕ್ರಾಮಿಕ ರೋಗಗಳು ಹರಡದಂತೆ ಮುನ್ನೆಚ್ಚರಿಕೆ ಕ್ರಮವಾಗಿ ಅಗತ್ಯ ಲಸಿಕೆಗಳನ್ನು ಸಮರ್ಪಕವಾಗಿ ಒದಗಿಸಬೇಕು ಎಂದು ಪಶುಸಂಗೋಪನೆ ಹಾಗೂ ರೇ ್ಮ ಸಚಿವ ಖಾತೆ ಸಚಿವರಾದ ಸಿ. ಪುಟ್ಟರಂಗಶೆಟ್ಟಿ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಪಶು ಆರೋಗ್ಯ ಮತ್ತು ಜೈವಿಕ ಸಂಸ್ಥೆಗೆ ಭೇಟಿ ನೀಡಿ, ಸಂಸ್ಥೆಯ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಇಲಾಖೆಯ ಕಾರ್ಯಚಟುವಟಿಕೆಗಳ ಕುರಿತು ಸಮಾಲೋಚನೆ ನಡೆಸಿ ಅವರು ಮಾತನಾಡಿದರು. ರಾಜ್ಯದಲ್ಲಿ ಜಾನುವಾರುಗಳಿಗೆ ಚರ್ಮಗಂಟು ರೋಗದ ಸಮಸ್ಯೆ ಹೆಚ್ಚಾಗುತ್ತಿರುವ ಹಿನ್ನೆಲೆ: ರೋಗ ಹರಡುವುದನ್ನು ತಡೆಗಟ್ಟಲು ಅಧಿಕಾರಿಗಳು ಹೆಚ್ಚಿನ ಮುತುವರ್ಜಿ ವಹಿಸಬೇಕು. ರೋಗ ನಿಯಂತ್ರಣಕ್ಕೆ ಅಗತ್ಯವಿರುವ ಲಸಿಕೆ, ಔ ಧೋಪಚಾರ ಹಾಗೂ ಮುನ್ನೆಚ್ಚರಿಕೆ ಕ್ರಮಗಳನ್ನು

ಪರಿಣಾಮಕಾರಿಯಾಗಿ ಕೈಗೊಳ್ಳಬೇಕು. ಜಾನುವಾರುಗಳ ಆರೋಗ್ಯ ರಕ್ಷಣೆಗೆ ಯಾವುದೇ ನಿರ್ಲಕ್ಷ್ಯ ತೋರದೆ ಕಾರ್ಯನಿರ್ವಹಿಸಬೇಕು ಎಂದು ಸಚಿವರು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

<><><>

ರಾಜ್ಯ ಸರ್ಕಾರವು ಕೇಂದ್ರ ಸರ್ಕಾರದೊಂದಿಗೆ ಸಮನ್ವಯ ಸಾಧಿಸುವ ಬದಲು ಪದೇ ಪದೇ ಸಂಘ 'ರ್ಷಕ್ಕೆ ಇಳಿಯುತ್ತಿದೆ ಎಂದು ವಿಧಾನಸಭೆಯ ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಆರೋಪಿಸಿದ್ದಾರೆ. ಮೈಸೂರಿನ ಬಿಜೆಪಿ ಕಚೇರಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೇಂದ್ರ ಸರ್ಕಾರ ರಾಜ್ಯದ ಗ್ರಾಮ ಪಂಚಾಯಿತಿಗಳಿಗೆ 2,133. ಕೋಟಿ ರೂಪಾಯಿ ಬಿಡುಗಡೆ ಮಾಡಿದ್ದು, ರಾಜ್ಯ ಸರ್ಕಾರ ವರ್ಗಾವಣೆ ಮಾಡಿರುವ ಅನುದಾನದಲ್ಲಿ 225 ಕೋಟಿ ರೂಪಾಯಿ ವ್ಯತ್ಯಾಸವಿದೆ ಎಂದು ದೂರಿದರು. ಈ ಹಣ ವರ್ಗಾವಣೆಗೆ ಸಂಬಂಧಿಸಿದಂತೆ ರಾಜ್ಯ ಸರ್ಕಾರ ಸೂಕ್ತ ಉತ್ತರ ನೀಡಬೇಕು ಎಂದು ಒತ್ತಾಯಿಸಿದರು. ಸ್ಥಳೀಯ ಸಂಸ್ಥೆಗಳ ಚುನಾವಣೆ ನಡೆಸದ ಕಾರಣ ಕೇಂದ್ರದ ಅನುದಾನ ಲಭ್ಯವಾಗುತ್ತಿಲ್ಲ. ಬರ ಪರಿಹಾರ ಮತ್ತು ರೈತರಿಗೆ ಪರಿಹಾರ ನೀಡುವ ವಿಚಾರದಲ್ಲೂ ರಾಜ್ಯ ಸರ್ಕಾರ ವಿಫಲವಾಗಿದೆ. ರಾಜ್ಯದ ಖಜಾನೆ ಖಾಲಿಯಾಗಿರುವುದರಿಂದ ರೈತರ ಖಾತೆಗಳಿಗೆ ಸಮರ್ಪಕವಾಗಿ ಹಣ ವರ್ಗಾವಣೆಯಾಗುತ್ತಿಲ್ಲ ಎಂದು ಟೀಕಿಸಿದರು.

<><><>

2047ರ ವೇಳೆಗೆ ಭಾರತ ವಿಕಸಿತ ರಾಷ್ಟ್ರವಾಗುವತ್ತ ಹೆಜ್ಜೆ ಹಾಕುತ್ತಿದೆ. ಅದಕ್ಕೆ ಎಲ್ಲರ ಸಹಕಾರ ಅಗತ್ಯ. ಈ ಮೂಲಕ ಭವ್ಯ ಭಾರತ ನಿರ್ಮಾಣ ಎಲ್ಲರ ಸಂಕಲ್ಪ ಎಂದು ಸಂಸದ ಕ್ಯಾಪ್ಟನ್ ಬ್ರಿಜೇಶ್ ಚೌಟ ಹೇಳಿದ್ದಾರೆ. **ಗದಗದ ಜಗದ್ಗುರು ತೋಂಟದಾರ್ಯ ಮಹಾವಿದ್ಯಾಲಯ** ಸಭಾಭವನದಲ್ಲಿ, ವಿಕಸಿತ ಭಾರತ 2047 ಹಾಗೂ ಪ್ರಜಾಪ್ರಭುತ್ವ ಅರಾಜಕತೆ ಕುರಿತು, ಯುವ ಸಂವಾದ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ವಿದ್ಯಾರ್ಥಿಗಳು, ವಕೀಲರು, ವೈದ್ಯರು, ಉದ್ಯಮಿಗಳು, ಕೃಷಿಕರು, ಸೈನಿಕರ ಕುರಿತು ಅನೇಕರೊಂದಿಗೆ, ಬ್ರಿಜೇಶ್ ಚೌಟ ಸಂವಾದ ನಡೆಸಿದರು.

<><><>

ಶ್ರವಣಮಾಪನಗಳ ವೈಜ್ಞಾನಿಕ ಪ್ರಗತಿಯಿಂದ ಶ್ರವಣ ದೋ 'ಗಳನ್ನು ಆರಂಭಿಕ ಹಂತದಲ್ಲೇ ಪತ್ತೆ ಹಚ್ಚಿ, ಸೂಕ್ತ ಪರಿಹಾರ ಒದಗಿಸಲು ಸಾಧ್ಯ ಎಂದು ವಿಕಲಚೇತನ ಇಲಾಖೆಯ ಆಯುಕ್ತ ಡಾಕ್ಟರ್ ಎಸ್.ವಿ.ವೆಂಕಟರಮಣಸ್ವಾಮಿ ಹೇಳಿದ್ದಾರೆ. **ಮೈಸೂರಿನ ಅಖಿಲ ಭಾರತ ವಾಕ್ ಮತ್ತು ಶ್ರವಣ ಸಂಸ್ಥೆ** ಆಯೋಜಿಸಿದ್ದ, 3ನೇ ಆಯು '್ ಅಂತಾರಾಷ್ಟ್ರೀಯ ಶ್ರವಣ ಸಮ್ಮೇಳನಕ್ಕೆ, ಚಾಲನೆ ನೀಡಿ ಅವರು ಮಾತನಾಡಿ; ತಜ್ಞರು ಮತ್ತು ವೃತ್ತಿಪರರನ್ನು ಒಟ್ಟುಗೂಡಿಸುವ ಇಂತಹ ಸಮಾವೇಶಗಳು ಆಡಿಯೋಲಜಿ ಕ್ಷೇತ್ರದಲ್ಲಿ ವೈಜ್ಞಾನಿಕ ಮಾಹಿತಿ ಮತ್ತು ಸಂಶೋಧನಾ ಫಲಿತಾಂಶವನ್ನು ವಿನಿಮಯ ಮಾಡಿಕೊಳ್ಳಲು ಸಹಕಾರಿ ಆಗಲಿವೆ ಎಂದು ಹೇಳಿದರು.

<><><>

ರಾಜ್ಯಕ್ಕೆ 4 ಸಾವಿರದ 504 ಕೋಟಿ ರೂಪಾಯಿ ತೆರಿಗೆ ಪಾಲು ಬಿಡುಗಡೆ ಮಾಡಿರುವ ಕೇಂದ್ರ ಸರ್ಕಾರದ ನಡೆಯನ್ನು, ಸಂಸದ ರಮೇಶ ಜಿಗಜಿಣಗಿ ಸ್ವಾಗತಿಸಿದ್ದಾರೆ. ವಿಜಯಪುರದಲ್ಲಿ ಮಾತನಾಡಿದ ಅವರು, ಕೇಂದ್ರ ಸರ್ಕಾರ ರಾಜ್ಯಗಳಿಗೆ ಒಟ್ಟು 1 ಲಕ್ಷದ 9 ಸಾವಿರ ಕೋಟಿ ರೂಪಾಯಿ ತೆರಿಗೆ ಪಾಲನ್ನು ಬಿಡುಗಡೆ ಮಾಡಿದ್ದು, ಕರ್ನಾಟಕಕ್ಕೂ ಹಣ ಹಂಚಿಕೆ ಮಾಡಿರುವುದು ಸಂತಸದ ಸಂಗತಿ. ಇದರಿಂದ ರಾಜ್ಯದಲ್ಲಿ ಅಭಿವೃದ್ಧಿ ಕಾರ್ಯಗಳು ಹಾಗೂ ಜನಕಲ್ಯಾಣ ಯೋಜನೆಗಳಿಗೆ ಸಹಕಾರಿಯಾಗಲಿದೆ. ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದ ಸರ್ಕಾರ ಅಭಿವೃದ್ಧಿಗಳಿಗೆ ಆದ್ಯತೆ ನೀಡಿರುವುದು ಶ್ಲಾಘನೀಯ ಎಂದರು.

<><><>

ಕನ್ನಡದಲ್ಲಿ ಪ್ರಾಥಮಿಕ ಶಿಕ್ಷಣ ಕಡ್ಡಾಯವಾಗಲಿ ಎಂದು, ಖ್ಯಾತ ಸಂಶೋಧಕ ಡಾಕ್ಟರ್ ವೀರಣ್ಣ ರಾಜೂರ, ಪ್ರತಿಪಾದಿಸಿದ್ದಾರೆ. ಧಾರವಾಡ ಜಿಲ್ಲೆ, 19ನೇ ಕನ್ನಡ ಸಾಹಿತ್ಯ ಸಮ್ಮೇಳನದ, ಸರ್ವಾಧ್ಯಕ್ಷ ಭಾಷಣ ಮಾಡಿದ ಅವರು, ಕನ್ನಡ ನಾಡು–ನುಡಿ, ಸಾಹಿತ್ಯ–ಸಮಾಜ, ಸಂಸ್ಕೃತಿ ಮೇಲಿನ ದೌರ್ಜನ್ಯ ತಡೆಗೆ, ಸಾತ್ವಿಕ ಬದುಕು, ಸ್ವಸ್ಥ ಸಮಾಜ ಮತ್ತು ಸುದೃಢ ರಾಷ್ಟ್ರ ನಿರ್ಮಿಸುವ ಕಾರ್ಯದಲ್ಲಿ, ತೊಡಗಿಸಿಕೊಳ್ಳುವ ಸಂದಿಗ್ಧತೆ ಸಾಹಿತಿಗಳಿಗೆ ಒದಗಿದೆ, ಎಂದು ಅವರು ಕಳವಳ ವ್ಯಕ್ತ ಪಡಿಸಿದರು. ಇಂದು ಸಾಹಿತ್ಯ ಚಿಂತನ,

ಚಿಂತನೆ, ಸರ್ವಾಧ್ಯಕ್ಷರೊಂದಿಗೆ ಸಂವಾದ, ಕವಿಗೋಷ್ಠಿ ನಡೆಯಲಿದ್ದು, ಸಂಜೆ ಸಮಾರೋಪ ಸಮಾರಂಭದಲ್ಲಿ, ಸಾಹಿತಿ ಡಾಕ್ಟರ್ ಬಸವರಾಜ ಸಾದರ ಸಮಾರೋಪ ಭಾಷಣ ಮಾಡಲಿದ್ದಾರೆ.

<><><>

ಕೊನೆಯಲ್ಲಿ ಮತೊಮ್ಮೆ ಮುಖ್ಯಾಂಶಗಳು:

- **ಪುರ ’ರ ಟ್ಟೀ ಸಮ ಪ್ರಮಾಣದಲ್ಲಿ ಮಹಿಳೆಯರು ಶಾಸಕಾಂಗದಲ್ಲಿ ಪಾಲ್ಗೊಂಡಾಗ ಪ್ರಜಾಪ್ರಭುತ್ವ ವ್ಯವಸ್ಥೆ ಪೂರ್ಣಗೊಳ್ಳಲು ಸಾಧ್ಯ– ರಾಜ್ಯಪಾಲರು.**

- **ಇದೇ 30ರಂದು ಮಂಗಳೂರಿನಲ್ಲಿ ಕರಾವಳಿ ವಿಭಾಗ ಮಟ್ಟದ ಬೃಹತ್ ಉದ್ಯೋಗ ಮೇಳ –ಸಚಿವ ಯು.ಟಿ. ಖಾದರ್.**

- **ಜಾನುವಾರುಗಳಿಗೆ ರೋಗ ತಡೆ ಲಸಿಕೆ ಸಮರ್ಪಕವಾಗಿ ತಲುಪಿಸಲು ಕ್ರಮ– ಸಚಿವ ಸಿ. ಪುಟ್ಟರಂಗಶೆಟ್ಟಿ**

- **ಕೇಂದ್ರ ಸರ್ಕಾರದೊಂದಿಗೆ ಸಮನ್ವಯ ಸಾಧಿಸುವ ಬದಲು ರಾಜ್ಯ ಸರ್ಕಾರ ಪದೇ ಪದೇ ಸಂಘ ’ರ್ಷಕ್ಕೆ ಇಳಿಯುತ್ತಿದೆ – ವಿಪಕ್ಷ ನಾಯಕ ಆರ್. ಅಶೋಕ್ ಆರೋಪ.**

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು. ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 7 ಗಂಟೆ 35 ನಿಮಿಷಕ್ಕೆ

<><><><><><><><><><><>